**2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ನಂಜನಗೂಡು**

**<u>ಸಿ.ಸಿ ನಂ.1445/2017</u>**

ಫಿರ್ಯಾದಿ

ನಂಜನಗೂಡು ಸಂಚಾರಿ ಪೊಲೀಸ್ ಠಾಣೆ

ವಿರುದ್ಧ

ಆರೋಪಿ

ಶಿವಕುಮಾರ್ ಬಿನ್ ಸ್ವಾಮಿ, 21 ವರ್ಷ,
ಚಿನ್ನದಗುಡಿಹುಂಡಿ ಗ್ರಾಮ, ನಂಜನಗೂಡು ತಾಲ್ಲೂಕು.

## <u>ಆರೋಪಣೆ</u>

ಶ್ರೀಮತಿ ವಿನುತ ಡಿ. ಎಸ್., ಬಿ.ಎಸ್ಸಿ (ಸೆರಿಕಲ್ಚರ್) , ಎಲ್.ಎಲ್.ಬಿ. 2ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಧೀಶರಾದ ನಾನು ನಿಮ್ಮ ಮೇಲೆ ಆಪಾದಿಸುವುದೇನೆಂದರೆ:

ದಿನಾಂಕ:27.04.2017 ರಂದು ಮಧ್ಯಾಹ್ನ 03.00 ಗಂಟೆ ಸಮಯದಲ್ಲಿ ನಂಜನಗೂಡು ಸಂಚಾರಿ ಪೊಲೀಸ್ ಠಾಣಾ ಸರಹದ್ದು ಕೆ ಆರ್ ಪುರ ಸರ್ಕಲ್ ಬಳಿ ನಂಜನಗೂಡು ಚಾಮರಾಜನಗರ ಮುಖ್ಯ ರಸ್ತೆಯಲ್ಲಿ ಆರೋಪಿಯಾದ ನೀವು ಕೆಎ-09-ಹೆಚ್ ಜಿ-5415 ರ ನಂಬರಿನ ಯಮಹಾ ಕಂಪನಿಯ ಮೋಟಾರು ಸೈಕಲನ್ನು ಚಾಮರಾಜನಗರ ಕಡೆಯಿಂದ ನಂಜನಗೂಡು ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದಿದ್ದು ಆ ಮೂಲಕ ನೀವು ಭಾ ದಂ ಸಂ ಕಲಂ 279 ರ ಅಡಿಯಲ್ಲಿ ದಂಡನೀಯವಾದ ಅಪರಾಧಗಳನ್ನು ನನ್ನ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೇಯದಾಗಿ , ಅದೇ ದಿನ , ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ ಆರೋಪಿಯಾದ ನೀವು ಸದರಿ ವಾಹನವನ್ನು ಅತಿವೇಗವಾಗಿ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ರಸ್ತೆಯ ಎಡಭಾಗದಲ್ಲಿ ನಡೆದುಕೊಂಡು ಹೋಗುತ್ತಿದ್ದ ಪುಟ್ಟಸ್ವಾಮಿರವರಿಗೆ ಹಿಂಭಾಗದಿಂದ ಡಿಕ್ಕಿ ಹೊಡೆಸಿದ ಪರಿಣಾಮ ಹಣೆಯ ಎಡಭಾಗದಲ್ಲಿ, ಎಡಕಿವಿಗೆ, ಎದೆಗೆ ಎಡತೋಳಿಗೆ, ಎಡಗಾಲಿನ ಮಂಡಿಗೆ ಹಾಗೂ ಇತರೆ ಕಡೆ ತೀವ್ರ ಸ್ವರೂಪದ ಗಾಯಗಳಾಗಿ ಚಿಕಿತ್ಸೆಗಾಗಿ ನಂಜನಗೂಡು ಸರ್ಕಾರಿ ಆಸ್ಪತ್ರೆಗೆ ಸೇರಿಸಿ ನಂತರ ಅಲ್ಲಿಂದ ಹೆಚ್ಚಿನ ಚಿಕಿತ್ಸೆಗೆ ಮೈಸೂರಿನ ಕೆ ಆರ್ ಆಸ್ಪತ್ರೆಗೆ ನಂತರ ಮೈಸೂರಿನ ಜೆ ಎಸ್ ಎಸ್ ಆಸ್ಪತ್ರೆಗೆ ದಾಖಲಿಸಿದ್ದು ಚಿಕಿತ್ಸೆ ಫಲಕಾರಿಯಾಗದೇ ದಿ:*12.05.2017* ರಂದು ಬೆಳಗಿನ ಜಾವ *01.45* ಗಂಟೆ ಸಮಯದಲ್ಲಿ ಪುಟ್ಟಸ್ವಾಮಿಯವರು ಮೃತಪಟ್ಟಿದ್ದು ಆ ಮೂಲಕ ನೀವು ಭಾ ದಂ ಸಂ ಕಲಂ *304(ಎ)*ರ ಅಡಿಯಲ್ಲಿ ದಂಡನೀಯವಾದ ಅಪರಾಧಗಳನ್ನು ನನ್ನ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೇಯದಾಗಿ , ಅದೇ ದಿನ , ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ ಆರೋಪಿಯಾದ ನೀವು ವಾಹನ ಚಾಲನಾ ಪರವಾನಗಿ ಇಲ್ಲದೇ ಹಾಗೂ ವಿಮೆ ಇಲ್ಲದೇ ವಾಹನವನ್ನು ಚಾಲನೆ ಮಾಡಿದ್ದು ಆ ಮೂಲಕ ಮೋಟಾರು ವಾಹನ ಕಾಯ್ದೆ ಕಲಂ *3(1)* ರೆ/ವಿ *181* ಹಾಗೂ *146* ರೆ/ವಿ *196* ರ ಅಡಿಯಲ್ಲಿ ದಂಡನೀಯವಾದ ಅಪರಾಧಗಳನ್ನು ನನ್ನ ಸಂಜ್ಞಾನದಲ್ಲಿ ಎಸಗಿರುವಿರಿ.

Shivi

ಕೊನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ ಆರೋಪಿಯಾದ ನೀವು ಸದರಿ ಅಪಘಾತವನ್ನು ಮಾಡಿ ಗಾಯಾಳುವಿಗೆ ಚಿಕಿತ್ಸೆಯನ್ನು ಕೊಡಿಸದೇ ಹಾಗೂ ಸದರಿ ಅಪಘಾತದ ವಿಚಾರವನ್ನು ಪೋಲೀಸರಿಗೆ ಮಾಹಿತಿ ನೀಡದೆ ಹೊರಟು ಹೋಗಿದ್ದು ಆ ಮೂಲಕ ಮೋಟಾರು ವಾಹನ ಕಾಯ್ದೆ ಕಲಂ 187 ಅಡಿಯಲ್ಲಿ ದಂಡನೀಯವಾದ ಅಪರಾಧಗಳನ್ನು ನನ್ನ ಸಂಜ್ಞಾನದಲ್ಲಿ ಎಸಗಿರುವಿರಿ.

ಸದರೀ ಆರೋಪಿಣೆಯು ನನ್ನ ಸಂಜ್ಞಾನದಲ್ಲಿದ್ದು ವಿಚಾರಣೆಯು ಇದೇ ನ್ಯಾಯಾಲಯದಲ್ಲಿ ನಡೆಯುವಂತೆ ನಾನು ನಿರ್ದೇಶಿಸಿರುತ್ತೇನೆ.

ಪ್ರಶ್ನೆ:1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಉತ್ತರ: ತಿಳಿಯಿತು.

ಪ್ರಶ್ನೆ:2: ಮೇಲ್ಕಂಡ ಆರೋಪವನ್ನು ನೀವು ಒಪ್ಪಿಕೊಳ್ಳುವಿರೋ? ಅಥವಾ ಪ್ರತಿಸ್ಪರ್ಧೆ ಮಾಡಿಕೊಳ್ಳ ಬಯಸುವಿರೋ?

ಉತ್ತರ: ಇಲ್ಲ. ವಿಚಾರಣೆಯಾಗಲಿ.

ಮೇಲ್ಕಂಡ ಆಪಾದನೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಅರ್ಥಮಾಡಿಕೊಂಡಿರುವ ತೆರೆದ ನ್ಯಾಯಾಲಯದಲ್ಲಿ ಬರೆದುಕೊಂಡಿದ್ದು ಆರೋಪಿ ನೀಡಿರುವ ಉತ್ತರವು ಸಂಪೂರ್ಣ ಹಾಗೂ ಸರಿಯಾದ ದಾಖಲೆ ಎಂದು ನಾನು ಈ ಮೂಲಕ ದಿ:27.10.2021 ರಂದು ದೃಢೀಕರಿಸುತ್ತೇನೆ.

Shv

19/10/21

2 ನೇ ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ
ನಂಜನಗೂಡು